**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ, ಬೆಂಗಳೂರು.**

## ಜನವರಿ-2022ರ ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 21-01-2022

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ

ಸಮಯ : ಬೆಳಿಗ್ಗೆ 11.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀಮತಿ ಶ್ವೇತಾ .ಬಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 163, ಕತ್ರಿಗುಪ್ಪೆ |
| 3. | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 4. | ಶ್ರೀ ಸುನಿಲ್.ಕೆ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 5. | ಶ್ರೀ ಉಮೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 6. | ಶ್ರೀ ನಾಗರಾಜ್ | ಕೆಲಸ ಪರಿವೀಕ್ಷಕರು, ವಾರ್ಡ್ ನಂ. 163 |
| 7. | ಶ್ರೀ ಹೇಮಚಂದ್ರ | ಆರೋಗ್ಯ ವೈದ್ಯಾಧಿಕಾರಿ (ಬಸವನಗುಡಿ) ಕಛೇರಿ ಸಿಬ್ಬಂದಿ |
| 8. | ಶ್ರೀ ಪ್ರವೀಣ್ .ಎಸ್ | ಮಾರ್ಷಲ್ |
| 9. | ಮಾಲತಿ | ಆರೋಗ್ಯ ವೈದ್ಯಾಧಿಕಾರಿ (ಬಸವನಗುಡಿ) ಕಛೇರಿ ಸಿಬ್ಬಂದಿ |
| 10. | ಆಶಾ | ಆರೋಗ್ಯ ವೈದ್ಯಾಧಿಕಾರಿ (ಬಸವನಗುಡಿ) ಕಛೇರಿ ಸಿಬ್ಬಂದಿ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ವಿಂಗಡಿಸಿ ವಿಲೇವಾರಿ ಮಾಡಲಾಗಿರುತ್ತದೆ ಎಂದು ಹಾಗೂ ಕತ್ರಿಗುಪ್ಪೆ ವಾರ್ಡ್‌ನ್ನು 24 ಬ್ಲಾಕ್‌ಗಳಾಗಿ ವಿಂಗಡಿಸಿರುತ್ತಾರೆ. ಘನತ್ಯಾಜ್ಯ ನಿರ್ವಹಣೆಯ ವಾಹನಗಳಿಗೆ ಜಿ.ಪಿ.ಎಸ್.ನ್ನು ಅಳವಡಿಸಿರುತ್ತಾರೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

2. ವಾರ್ಡ್-163ರ ವ್ಯಾಪ್ತಿಯಲ್ಲಿ ನಿರ್ಮಿಸುತ್ತಿರುವ ಅನಧಿಕೃತ ಕಟ್ಟಡಗಳ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅನಧಿಕೃತ ಕಟ್ಟಡಗಳಿಗೆ ಭೇಟಿ ನೀಡಿ ಪರಿಶೀಲಿಸಿ ಅವಶ್ಯವಿದ್ದಲ್ಲಿ ಸದರಿ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡಲು ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯಲ್ಲಿ ಇರುವ ರಸ್ತೆಗುಂಡಿಗಳನ್ನು ಮುಚ್ಚುವುದು, ಚರಂಡಿಗಳನ್ನು ದುರಸ್ಥಿಗೊಳಿಸುವುದು ಮತ್ತು ಹಾಳಾಗಿರುವ ರಸ್ತೆಗಳ ಕಾಮಗಾರಿಯನ್ನು ತುರ್ತಾಗಿ ಕೈಗೆತ್ತಿಕೊಂಡು ನಿರ್ವಹಿಸಲು ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು.

4. ಕೋವಿಡ್-19 ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕೆಂದು ಹಾಗೂ ಸಾರ್ವಜನಿಕರು ಸ್ಯಾನಿಟೈಸರ್ ಬಳಸಲು ಮತ್ತು ಮಾಸ್ಕ್‌ಗಳನ್ನು ಧರಿಸಲು ಅರಿವು ಮೂಡಿಸಲು ಕ್ರಮವಹಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

5. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯ ಹಲವು ರಸ್ತೆಗಳಲ್ಲಿ ಖಾಸಗಿ ಕಂಪನಿಯಾದ ಜಿಯೋ ರವರು ಕೇಬಲ್ ಅಳವಡಿಸಲು ರಸ್ತೆಗಳನ್ನು ಅಗೆದಿದ್ದು, ಸದರಿ ರಸ್ತೆಗಳನ್ನು ಕೂಡಲೇ ದುರಸ್ಥಿಗೊಳಿಸಿ ರಸ್ತೆ ಬದಿಯಲ್ಲಿರುವ ಕೇಬಲ್‌ಗಳನ್ನು ತೆರವುಗೊಳಿಸುವಂತೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

6. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯ ಮುಖ್ಯರಸ್ತೆಗಳಲ್ಲಿ ಧೀರ್ಘಕಾಲದಿಂದ ಪಾದಚಾರಿ ಮಾರ್ಗದಲ್ಲಿ ಬೀದಿ ವ್ಯಾಪಾರಿಗಳು ಹೆಚ್ಚಾಗಿರುವುದು ಕಂಡುಬಂದಿದ್ದು, ಸದರಿ ಬೀದಿ ವ್ಯಾಪಾರಿಗಳನ್ನು ಕೂಡಲೇ ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಯಿತು.

7. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ. ಅದರಂತೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಬೆಸ್ಕಾಂನ ಸಹಾಯಕ ಅಭಿಯಂತರರಿಗೆ ರಸ್ತೆ ಮೇಲ್ಭಾಗದಲ್ಲಿ ಇರುವ ಕೇಬಲ್‌ಗಳನ್ನು ತೆರವುಗೊಳಿಸಿ ರಸ್ತೆಯನ್ನು ವಾಹನ ಸಂಚಾರಕ್ಕೆ ಮತ್ತು ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಿಕೊಡಲು ಹಾಗೂ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಸೂಚಿಸಿರುತ್ತಾರೆ.

8. ಕತ್ರಿಗುಪ್ಪೆ ವಾರ್ಡ್-163ರ ಕಂದಾಯ ಬಾಕಿಯನ್ನು ವಸೂಲಿ ಮಾಡಲು ವಾರ್ಡ್ ಮಟ್ಟದಲ್ಲಿ ಜಾತಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಕಂದಾಯ ವಸೂಲಾತಿ ಮಾಡಲು ಕ್ರಮವಹಿಸಲಾಗುವುದು ಎಂದು ಕಂದಾಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Swethi R

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ